**ದಿನಾಂಕಃ 18.11.2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 1ನೇ ಎದುದಾರರ ಪರ ಮಾನ್ಯ ವಕೀಲರಿಂದ.**

ನನಗೆ ಈಗ 70 ವರ್ಷ ವಯಸ್ಸು ಆಗಿರಬಹುದು. ನನಗೆ 75ಕ್ಕಿಂತ ಹೆಚ್ಚಿ ನ ವಯಸ್ಸು ಆಗಿದೆ ಎಂದರೆ ಸರಿಯಲ್ಲ. ನಾನು ಅಂಗಡಿಗೆ ಹೋಗಿ ಬರುತ್ತಿದ್ದಾಗ ಅಪಘಾತವಾಗಿರುತ್ತದೆ. ಅಪಘಾತವಾದ ದಿನಾಂಕ ಮತ್ತು ಸಮಯ ನನಗೆ ನೆನಪಿಲ್ಲ, ಆದರೆ ಒಂದು ವರ್ಷದ ಮೇಲೆ ಒಂದು ತಿಂಗಳು ಆಗಿರುತ್ತದೆ. ದೂರನ್ನು 25 ದಿನಗಳ ನಂತರ ತಡವಾಗಿ ನೀಡಲಾಗಿದೆ ಎಂದರೆ ಸರಿ. ನಾನು ಆಸ್ಪತ್ರೆಯಲ್ಲಿದ್ದ ಕಾರಣ ಅಪಘಾತವಾದ ದಿನಾಂಕಂದು ದೂರು ನೀಡಲು ಸಾಧ್ಯವಾಗಲಿಲ್ಲ. ಯಾವುದೋ ಒಂದು ಅಪರಿಚಿತ ವಾಹನ ನನಗೆ ಅಪಘಾತಪಡಿಸಿದೆ ಎಂದರೆ ಸರಿಯಲ್ಲ. ನನಗೆ ಆಪಾದಿತ ವಾಹನದಿಂದ ಅಪಘಾತವಾಗಿಲ್ಲ ಎಂದರೆ ಸರಿಯಲ್ಲ. ಉದ್ದೇಶಪೂರ್ವಕವಾಗಿ ಪರಿಹಾರ ಪಡೆಯಲು ಸುಳ್ಳು ದೂರನ್ನು ಆಪಾದಿತ ವಾಹನದ ವಿರುದ್ದ ತಡವಾಗಿ ನೀಡಲಾಗಿದೆ ಎಂದರೆ ಸರಿಯಲ್ಲ. ವಾಹನದ ಮಾಲೀಕರು ಮತ್ತು ಪೊಲೀಸರೊಂದಿಗೆ ಶಾಮೀಲಾಗಿ ಸುಳ್ಳು ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ದೂರನ್ನು ನೀಡಿದ ಮುನೇಶ್ ರವರು ಅಪಘಾತವನ್ನು ಕಣ್ಣಾರೆ ನೋಡಿಲ್ಲ. ಪ್ರತ್ಯಕ್ಷದರ್ಶಿಗಳನ್ನು ವಿಚಾರಣೆಗೆ ಒಳಪಡಿಸಲು ತೊಂದರೆ ಇಲ್ಲ. ಅಪಘಾತವನ್ನು ರಾಜಣ್ಣ, ಚಿಕ್ಕಬಸವ ಮತ್ತು ರಾಮಣ್ಣ ಎಂಬುವವರು ನೋಡಿರುತ್ತಾರೆ. ಪೊಲೀಸರು ತಯಾರಿಸಿದ ಅಂತಿಮ ವರದಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ಸದರಿ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ.

ಅಪಘಾತವಾದ ನಂತರ ಹಾರೊಹಳ್ಳಿ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿರುತ್ತೇನೆ. ಸದರಿ ಆಸ್ಪತ್ರೆಯಲ್ಲಿ ಒಂದು ತಿಂಗಳುಗಳ ಕಾಲ ಇದ್ದೆನು. ಸದರಿ ಆಸ್ಪತ್ರೆಯಲ್ಲಿ ಅಪಘಾತದ ಬಗ್ಗೆ ಮಾಹಿತಿ ನೀಡಿರುತ್ತೇನೆ. ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಲು ತೊಂದರೆ ಇಲ್ಲ. ನನಗೆ ಯಾವುದೇ

ಶಸ್ತ್ರ ಚಿಕಿತ್ಸೆ ಆಗಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ಉಂಟಾದ ಗಾಯಗಳು ವಾಸಿಯಾಗಿವೆ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನಗೆ ಸಣ್ಣಪುಟ್ಟ ಗಾಯಾಳು ಆಗಿದ್ದು, ಈಗಲೂ ಮೊದಲಿನಂತೆ ನಾನು ಆರೋಗ್ಯವಾಗಿದ್ದೇನೆ ಎಂದರೆ ಸರಿಯಲ್ಲ. ಚಿಕಿತ್ಸೆಗೆ ಮತ್ತು ಇತರೆ ಖರ್ಚುಗಳಿಗೆ ನಾನು ಹೇಳಿರುವಷ್ಟು ಹಣವನ್ನು ವ್ಯಯಿಸಿಲ್ಲ ಎಂದರೆ ಸರಿಯಲ್ಲ.

ನಾನು ಯಾವುದೇ ಕೆಲಸ ಮಾಡುತ್ತಿರಲಿಲ್ಲ ಮತ್ತು ನನಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿಯಲ್ಲ. ನನ್ನ ಕೆಲಸ ಮತ್ತು ಆದಾಯದ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ಆರ್ಥಿಕ ನಷ್ಟ ಉಂಟಾಗದೇ ಇದ್ದರೂ ಸಹ ಪರಿಹಾರ ಪಡೆಯುವ ಉದ್ದೇಶದಿಂದ ದಾಖಲಾತಿಗಳನ್ನು ಸೃಷ್ಟಿಸಿ ಹಾಜರುಪಡಿಸಿ, ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**